# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಸದಸ್ಯರ ಹೆಸರು | : | ಶ್ರೀ ಎಂ. ನಾಗರಾಜು<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಚುಕ್ಕೆಗುರುತಿನ ಪ್ರಶ್ನೆ ಸಂಖ್ಯೆ | : | 729 |
| ಉತ್ತರಿಸಬೇಕಾದ ದಿನಾಂಕ | : | 12.07.2023 |
| ಉತ್ತರಿಸಬೇಕಾದ ಸಚಿವರು | : | ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು. |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr>
<td>ಅ</td>
<td>ಹಾವೇರಿ ಜಿಲ್ಲೆಯ ಬ್ಯಾಡಗಿ ತಾಲ್ಲೂಕು ಅರಬಗೊಂಡ ಗ್ರಾಮದಲ್ಲಿ 30 ಎಕರೆ ವಿಸ್ತೀರ್ಣದಲ್ಲಿ ಒಂದು ಲಕ್ಷ ಲೀಟರ್ ಹಾಲಿನ ಸಾಮರ್ಥ್ಯದ ಮೆಗಾ ಡೈರಿ ಸ್ಥಾಪಿಸುವ ಯೋಜನೆ ಯಾವ ಹಂತದಲ್ಲಿದೆ; ಈ ಉದ್ದೇಶಕ್ಕಾಗಿ ಮೀಸಲಿಟ್ಟಿರುವ ಹಣವೆಷ್ಟು; ಮತ್ತು ಇದುವರೆಗೂ ಖರ್ಚು ಮಾಡಿರುವ ಹಣವೆಷ್ಟು; (ವಿವರ ನೀಡುವುದು)</td>
<td>2022-23ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವಂತೆ ಹಾವೇರಿ ಜಿಲ್ಲೆಯ ಬ್ಯಾಡಗಿ ತಾಲ್ಲೂಕಿನ ಅರಬಗೊಂಡ ಗ್ರಾಮದಲ್ಲಿ ಒಂದು ಲಕ್ಷ ಲೀಟರ್ ಸಾಮರ್ಥ್ಯದ ಮೆಗಾ ಡೈರಿ ಸ್ಥಾಪಿಸುವ ಕುರಿತಂತೆ ಸರ್ಕಾರದ ಆದೇಶ ಸಂಖ್ಯೆ: ಪಸಂಮೀ -ಇ 25 ಕಹಾಮ 2022, ದಿನಾಂಕ:04.08.2022ರನ್ವಯ ಹಾವೇರಿ ಜಿಲ್ಲಾ ಹಾಲು ಒಕ್ಕೂಟದ ವತಿಯಿಂದ ಒಟ್ಟಾರೆ ರೂ.70.00 ಕೋಟಿ ಯೋಜನಾ ಮೊತ್ತದಲ್ಲಿ ಅನುಷ್ಠಾನಗೊಳಿಸುವ ಸಂಬಂಧ ವಿಸ್ತೃತ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ.<br><br>ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಕೆಳಕಂಡಂತೆ ಅನುದಾನ ಬಿಡುಗಡೆಯಾಗಿರುತ್ತದೆ.<br><br>
<table>
<tr><td>ನಿಗದಿಯಾದ ಅನುದಾನ</td><td>ರೂ.70.00 ಕೋಟಿ</td></tr>
<tr><td>ಬಿಡುಗಡೆಯಾದ ಅನುದಾನ</td><td>ರೂ.40.00 ಕೋಟಿ</td></tr>
<tr><td>ವೆಚ್ಚ ಮಾಡಲಾದ ಅನುದಾನ</td><td>ರೂ.1.37 ಕೋಟಿ</td></tr>
</table>
<br>ಮೆಗಾ ಡೈರಿ ಯೋಜನೆಯ ಸಿವಿಲ್ ಕಾಮಗಾರಿಗಳಿಗೆ ಸಂಬಂಧಿಸಿದಂತೆ ರೂ.30.00 ಕೋಟಿಗಳ ಅನುದಾನವನ್ನು ನಿಗದಿಪಡಿಸಿದ್ದು, ಕೆ.ಎಂ.ಎಫ್. ಮೂಲಕ ಇ-ಟೆಂಡರ್ ಪ್ರಕ್ರಿಯೆ ನಡೆಸಿ, ಯಶಸ್ವಿ ಬಿಡ್ಡುದಾರರಿಗೆ ದಿನಾಂಕ: 15-03-2023 ರಂದು ಕಾರ್ಯಾದೇಶವನ್ನು ನೀಡಲಾಗಿರುತ್ತದೆ. ಅದರಂತೆ ಸಿವಿಲ್ ನಿರ್ಮಾಣ ಕೆಲಸಗಳು ಪ್ರಾರಂಭವಾಗಿದ್ದು, ನಿವೇಶನದ ಸುತ್ತಲೂ ಕಾಂಪೌಂಡ್ ವಾಲ್ ನಿರ್ಮಾಣ, ನೆಲ ಸಮತಟ್ಟುಗೊಳಿಸುವ ಕೆಲಸಗಳು ಅಂತಿಮಗೊಂಡಿದ್ದು, ಕಟ್ಟಡದ ತಳಪಾಯ ಒದಗಿಸುವ ಮತ್ತಿತರೆ ಕೆಲಸಗಳು ಪ್ರಸ್ತುತ ಪ್ರಗತಿಯಲ್ಲಿರುತ್ತದೆ.<br><br>ಮೆಗಾ ಡೈರಿ ಯೋಜನೆಗೆ ಸಂಬಂಧಿಸಿದ ಮೆಕ್ಯಾನಿಕಲ್ / ಯುಟಿಲಿಟಿ ಕೆಲಸಗಳಿಗೆ ಸಂಬಂಧಿಸಿದಂತೆ ಒಟ್ಟಾರೆ ರೂ.40.00 ಕೋಟಿಯನ್ನು ನಿಗದಿಪಡಿಸಲಾಗಿದ್ದು, ಕೆ.ಎಂ.ಎಫ್. ಮೂಲಕ ಟೆಂಡರ್ ಪ್ರಕ್ರಿಯೆಯು ಜಾರಿಯಲ್ಲಿರುತ್ತದೆ.</td>
</tr>
</table>

--2

| | | |
|---|---|---|
| ಆ | ಮೆಗಾ ಡೈರಿ ಸ್ಥಾಪನೆಯಿಂದ ಈ ಪ್ರಾಂತದಲ್ಲಿ ಎಷ್ಟು ಉದ್ಯೋಗ ಸೃಷ್ಟಿಯಾಗುತ್ತವೆ; ಇವುಗಳಲ್ಲಿ ಸ್ಥಳೀಯರಿಗೆ ಆದ್ಯತೆ ಮೇರೆಗೆ ಉದ್ಯೋಗ ನೀಡುವ ಯೋಜನೆ ಇದೆಯೇ?<br>(ಹಾಗಿದ್ದಲ್ಲಿ, ವಿವರ ನಿಡುವುದು) | ಮೆಗಾ ಡೈರಿ ಸ್ಥಾಪನೆಯಿಂದ ಈ ಪ್ರಾಂತ್ಯದಲ್ಲಿ ಅಂದಾಜು 125 ಜನರಿಗೆ ಉದ್ಯೋಗ ಸೃಷ್ಟಿಯಾಗುತ್ತದೆ. ಇವುಗಳಲ್ಲಿ ಸ್ಥಳೀಯರಿಗೆ ಆದ್ಯತೆ ನೀಡಲು ನಿಯಮಾನುಸಾರ ಕ್ರಮವಹಿಸಲಾಗುವುದು. |

**ಇ- ಪಸಂಮೀ 115 ಸಲೆವಿ 2023**

**(ಕೆ. ವೆಂಕಟೇಶ್)**
**ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು**